ಪತ್ರಿಕಾ ತುಣುಕುಗಳು
**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE 10/4/2021

# ವಿವಾಹಿತ ಪುತ್ರಿಗೂ ಅನುಕಂಪದ ನೌಕರಿ: ಸರ್ಕಾರ ಮಹತ್ವದ ಆದೇಶ

10.4.21

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಸರ್ಕಾರಿ ನೌಕರರು ಅಕಾಲಿಕ ಮರಣಕ್ಕೀಡಾದ ಸಂದರ್ಭದಲ್ಲಿ ಅನುಕಂಪ ಆಧಾರಿತ ಹುದ್ದೆಗಳನ್ನು ಮೃತರ ಮಗಳಿಗೂ ನೀಡಬಹುದು.



ಮೃತರ ಪತಿ ಅಥವಾ ಪತ್ನಿ ಸೂಚಿಸುವ ಅವಿವಾಹಿತ, ವಿವಾಹಿತ ಅಥವಾ ವಿಚ್ಛೇದಿತ ಮಗಳಿಗೆ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡಬಹುದು ಎಂಬ ಮಹತ್ವದ ಆದೇಶವನ್ನು ರಾಜ್ಯ ಸರ್ಕಾರ ಹೊರಡಿಸಿದೆ. ಅವಿವಾಹಿತರಾಗಿದ್ದರೆ ಅವರತಂದೆ-ತಾಯಿಸೂಚಿಸಿದಸಹೋದರ/ಸಹೋದರಿಯನ್ನು ನೇಮಕ ಮಾಡಬಹುದು. ಪೋಷಕರು ಮೃತರಾಗಿದ್ದರೆ ವಯಸ್ಸಿನ ಆಧಾರದಲ್ಲಿ ಹಿರಿಯ ಸೋದರ/ಸೋದರಿಗೆ ನೀಡಬಹುದು ಎಂದು ಆದೇಶಿಸಲಾಗಿದೆ.

## ಯಾರು ಅರ್ಹರು?

ಮೃತ ಪುರುಷ ವಿವಾಹಿತ ನೌಕರನಾಗಿದ್ದರೆ ಆತನ ಮೇಲೆ ಅವಲಂಬಿತರಾಗಿದ್ದ ಆತನ ವಿಧವಾ ಪತ್ನಿ, ಮಗ ಮತ್ತು ಮಗಳು ಅರ್ಹರಾಗಿರುತ್ತಾರೆ. ಮೃತನಪತ್ನಿಯುನೇಮಕಾತಿಗೆಅರ್ಹಳಲ್ಲದಿದ್ದರೆ ಅವರು ಸೂಚಿಸಿದ ಮಗ ಅಥವಾ ಮಗಳನ್ನು ನೇಮಕಾತಿ ಮಾಡಬಹುದು. ಮಹಿಳಾ ಉದ್ಯೋಗಿ ವಿವಾಹಿತೆಯಾಗಿದ್ದು ಮೃತಪಟ್ಟರೆ ಆಕೆಯ ಮೇಲೆ ಅವಲಂಬಿತರಾಗಿದ್ದ ಆಕೆಯ ಮಗ, ಮಗಳು ಅಥವಾ ಪತಿಯು ಅರ್ಹರಾಗಿರುತ್ತಾರೆ. ಅವಿವಾಹಿತೆಯಾಗಿದ್ದರೆ ಆಕೆಯೊಂದಿಗೆ ವಾಸವಿದ್ದ ಸಹೋದರ ಅಥವಾ ಸಹೋದರಿ ಅರ್ಹರಾಗುತ್ತಾರೆ. ಮೃತ ನೌಕರರ ಪತಿ ಅಥವಾ ಪತ್ನಿ ಈಗಾಗಲೇ ನಿಧನರಾಗಿದ್ದು ಮಕ್ಕಳು ಅಪ್ರಾಪ್ತರಾಗಿದ್ದರೆ 2 ವರ್ಷದೊಳಗೆ 18 ವರ್ಷ ಪೂರೈಸುವವರಿಗೆ ಅವಕಾಶ ನೀಡಬಹುದು. 18 ವರ್ಷ ತುಂಬಿದ ಬಳಿಕ ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರಿಗೆ ಅರ್ಜಿ ಸಲ್ಲಿಸಲು ಎರಡು ವರ್ಷ ಕಾಲಾವಕಾಶ ನೀಡಬೇಕು. ಅಪ್ರಾಪ್ತ ಮಕ್ಕಳ ವಯಸ್ಸು ಸೂಕ್ತವಾಗಿಲ್ಲದಿದ್ದರೆ ಅವರೊಂದಿಗೆ ವಾಸಿಸುವ ಹಾಗೂ ಅವರನ್ನು ಪೋಷಿಸುವಕಾನೂನಿನಪ್ರಕಾರಪ್ರಮಾಣೀಕೃತಪೋಷಕರು ಅರ್ಹರಾಗುತ್ತಾರೆ ಎಂದು ಆದೇಶಿಸಲಾಗಿದೆ.